ಕರ್ನಾಟಕ ವಿಧಾನ ಪರಿಷತ್ತು

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	33
2	ಸದಸ್ಯರ ಹೆಸರು	ಶ್ರೀ ಪ್ರಕಾಶ್ ಕೆ ರಾಥೋಡ್
3	ಉತ್ತರಿಸಬೇಕಾದ ದಿನಾಂಕ	21/09/2020
4	ಉತ್ತರಿಸಬೇಕಾದ ಸಚಿವರು	ವೈದ್ಯಕೀಯ ಶಿಕ್ಷಣ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ)</td><td>ರಾಜ್ಯದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ: (ವಿವರ ನೀಡುವುದು)</td><td rowspan="3">ಕೇಂದ್ರ ಸರ್ಕಾರದ ಯೋಜನೆಯನ್ವಯ ಸರ್ಕಾರಿ/ಖಾಸಗಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಅವಕಾಶವಿದ್ದು, ಈ ಯೋಜನೆ ಅಡಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪಾಲು ಶೇ.40:60 ರ ಅನುಪಾತದಲ್ಲಿ ಒಟ್ಟು ರೂ.325.00 ಕೋಟಿಗಳ ಅನುದಾನ ಲಭ್ಯವಾಗಲಿದೆ.

ಸದರಿ ಯೋಜನೆಯನ್ವಯ ಖಾಸಗಿ/ಸರ್ಕಾರಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಾದ ಹಾವೇರಿ, ಯಾದಗಿರಿ, ಚಿಕ್ಕಮಗಳೂರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಈಗಾಗಲೇ ಕ್ರಮವಹಿಸಲಾಗಿದೆ.

ವಿಜಯಪುರ ಜಿಲ್ಲೆಯಲ್ಲಿ ಈಗಾಗಲೇ ಖಾಸಗಿ ವೈದ್ಯಕೀಯ ಕಾಲೇಜು ಕಾರ್ಯ ನಿರ್ವಹಿಸುತ್ತಿರುವುದರಿಂದ ಈ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸುವುದು ಕೇಂದ್ರ ಸರ್ಕಾರದ ಯೋಜನೆಯ ವ್ಯಾಪ್ತಿಗೆ ಒಳಪಡುವುದಿಲ್ಲ.

ರಾಜ್ಯ ಸರ್ಕಾರದ ವತಿಯಿಂದ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಅಂದಾಜು ರೂ.610.00 ಕೋಟಿಗಳ ಅನಾವರ್ತಕ ವೆಚ್ಚ ಹಾಗೂ ವಾರ್ಷಿಕ ರೂ.60.00 ಕೋಟಿಗಳ ಆವರ್ತಕ ವೆಚ್ಚದ ಅವಶ್ಯಕತೆ ಇರುತ್ತದೆ.

ಪ್ರಸ್ತುತ ಅನುದಾನದ ಕೊರತೆಯ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ವತಿಯಿಂದಲೇ ಪೂರ್ಣ ವೆಚ್ಚ ಭರಿಸಿ, ಹೊಸ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸುವ ಯಾವುದೇ ಪ್ರಸ್ತಾವನೆಗಳು ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.</td></tr>
<tr><td>ಆ)</td><td>ಇದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ: (ವಿವರ ನೀಡುವುದು)</td></tr>
<tr><td>ಇ)</td><td>ವಿಜಯಪುರ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಯಾವಾಗ ಪ್ರಾರಂಭಿಸಲಾಗುವುದು? (ವಿವರ ನೀಡುವುದು)</td></tr>
</table>

ಸಂಖ್ಯೆ: ಎಂಇಡಿ 462ಎಂಎಂಸಿ 2020

(ಡಾ|| ಕೆ. ಸುಧಾಕರ್)
ವೈದ್ಯಕೀಯ ಶಿಕ್ಷಣ ಸಚಿವರು